



ಅರುಣ ಪಿ. ಭಟ್ಟ


## ವಾರಭವಿಷ್ಯ: 10.07.2025ರಿಂದ 16.07.2025ರವರೆಗೆ




ಈ ವಾರ ನಿಮ್ಮ ವರ್ಚಸ್ಸು ವೃದ್ಧಿ ಆಗಲಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ನಿರೀಕ್ಷೆಗಿಂತ ಹೆಚ್ಚಿನ ಪ್ರಗತಿ. ಶತ್ರುಗಳ ಉಪಟಳ ಹೆಚ್ಚಾಗಲಿದೆ. ಇದರಿಂದ ಮಾನಸಿಕ ಆತಂಕಕ್ಕೆ ಗುರಿಯಾಗುತ್ತೀರಿ. ವಾರದ ಕೊನೆ ಮೂರು ದಿನ ಅನುಕೂಲ ಸನ್ನಿವೇಶ ಇದೆ. ದುಬಾರಿ ವಸ್ತು, ಆಸ್ತಿ ಖರೀದಿಗೆ ಅವಕಾಶಗಳು ಸೃಷ್ಟಿಯಾಗಲಿವೆ. ಈ ವಾರ ಉದ್ದೇಶಿತ ಕಾರ್ಯ ಈಡೇರುತ್ತದೆ. ಶುಭದಿನ: 12. ಶ್ರೀರಾಜರಾಜೇಶ್ವರಿ ಜಪ ಮಾಡಿರಿ.




ವಾರದ ಆರಂಭದಲ್ಲಿ ಉದ್ಯೋಗ ಸ್ಥಳದಲ್ಲಿ ಏಳ್ಗೆ ಇದೆ. ಮನೆಯಲ್ಲಿ ಸಂತೋಷದ ವಾತಾವರಣ ಇರುತ್ತದೆ. ಬಿಡುವಿಲ್ಲದ ಕೆಲಸದ ಮಧ್ಯೆಯೂ ಸಂಗಾತಿ ಮಕ್ಕಳ ಜೊತೆ ಸಮಯ ಕಳೆಯಲಿದ್ದೀರಿ. ವಾರದ ಮಧ್ಯಭಾಗದಲ್ಲಿ ನಿರೀಕ್ಷೆ ಮೀರಿ ಹೆಚ್ಚಿನ ಅನುಕೂಲ ಒದಗಿಬರಲಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ನಿಮ್ಮ ಶ್ರಮಕ್ಕೆ ತಕ್ಕ ಫಲ ದೊರೆಯಲಿದೆ. ಹೆಚ್ಚಿನ ಹಣ ಖರ್ಚು ಮಾಡಲಿದ್ದೀರಿ. ಶುಭದಿನ: 11. ಶ್ರೀರಾಮ ರಕ್ಷಾಸ್ತೋತ್ರ ಪಠಿಸಿರಿ.





ವಾರದ ಆರಂಭದಲ್ಲೇ ಮನೆಯಲ್ಲಿ ದೇವತಾ ಆರಾಧನೆ ಮಾಡುವ ಸಾಧ್ಯತೆ. ಸಾಮಾಜಿಕ ಚಟುವಟಿಕೆಯಲ್ಲಿ ಪಾಲ್ಗೊಳ್ಳಲಿದ್ದೀರಿ. ಅಗತ್ಯ ಇರುವವರಿಗೆ ನೆರವು ನೀಡಲಿದ್ದೀರಿ. ಆದಾಯದಲ್ಲಿ ಹೆಚ್ಚಳ ಆಗುವ ಸಾಧ್ಯತೆ ಇದೆ. ಮನೆಯ ವಿಚಾರದಲ್ಲಿ ಗಮನಹರಿಸಬೇಕಾದ ಅಗತ್ಯ ಕಂಡು ಬರುತ್ತದೆ. ವಾರಾಂತ್ಯಕ್ಕೆ ವೆಚ್ಚ ಹೆಚ್ಚಳವಾಗುತ್ತದೆ. ಶುಭದಿನ: 11. ಸೌಂದರ್ಯ ಲಹರಿ ಪಠಿಸಿರಿ.





ಉದ್ಯೋಗಕ್ಕೆ ಹೊರತಾದ ಕೆಲಸಗಳನ್ನು ಪೂರೈಸುವುದಕ್ಕೇ ವಾರದ ಶುರುವಿನಲ್ಲಿ ಸಮಯ ನೀಡಬೇಕಾಗುತ್ತದೆ. ಹಣ ಹೂಡಿಕೆಯಲ್ಲಿ ಉತ್ತಮ ಪ್ರಗತಿ ಇದೆ. ಉದ್ಯೋಗ ಸ್ಥಳದಲ್ಲಿ ಅಂದುಕೊಂಡ ಸ್ಥಾನಮಾನ ಪಡೆಯಲು ವಾರದ ಮಧ್ಯಭಾಗದಲ್ಲಿ ಅವಕಾಶ ದೊರೆಯುತ್ತದೆ. ಕಾನೂನು ವಿಚಾರಕ್ಕೆ ಸಂಬಂಧಿಸಿದ ಜವಾಬ್ದಾರಿಗಳನ್ನು ಪೂರೈಸಲು ಗಮನ ನೀಡಬೇಕಾಗುತ್ತದೆ. ಶುಭದಿನ: 14. ಲಿಂಗಾಷ್ಟಕ ಪಠಿಸಿರಿ




ದಾಂಪತ್ಯ ಜೀವನ ಸಂತೋಷವಾಗಿ ಇರುತ್ತದೆ. ಸಂಬಂಧದಲ್ಲಿ ಬಾಂಧವ್ಯ ಇನ್ನಷ್ಟು ಗಟ್ಟಿಯಾಗುತ್ತದೆ. ಬಹುಕಾಲದ ಯೋಜನೆಗಳನ್ನು ಅನುಷ್ಠಾನಕ್ಕೆ ತರಲಿದ್ದೀರಿ. ಇದರಿಂದ ಭವಿಷ್ಯದಲ್ಲಿ ದೊಡ್ಡ ಮಟ್ಟದ ಉಪಯೋಗ ಆಗಲಿದೆ. ವಾರದ ಮಧ್ಯ ಭಾಗದಲ್ಲಿ ಪ್ರವಾಸಕ್ಕೆ ತೆರಳುವ ಸಾಧ್ಯತೆ ಇದೆ. ಆದರೆ ಆರೋಗ್ಯದಲ್ಲಿ ಏರುಪೇರಾಗಬಹುದು, ಎಚ್ಚರ. ಶುಭದಿನ: 15. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.





ಕೆಲಸಗಳು ಆಗಲಿಲ್ಲ ಅಂದರೂ ನಿಮ್ಮ ಆತ್ಮವಿಶ್ವಾಸದಲ್ಲಿ ಯಾವುದೇ ಕುಂದುಂಟಾಗುವುದಿಲ್ಲ. ಮನೆಗೆ ಅಗತ್ಯ ಇರುವ ವಸ್ತುಗಳ ಖರೀದಿಗೆ ಹೆಚ್ಚಿನ ಹಣ ವ್ಯಯ ಮಾಡಲಿದ್ದೀರಿ. ಹಣದ ಅಗತ್ಯವನ್ನು ಪೂರೈಸಿಕೊಳ್ಳುವ ಸಲುವಾಗಿ ಸಾಲಕ್ಕಾಗಿ ಅರ್ಜಿ ಹಾಕಿಕೊಳ್ಳಲಿದ್ದೀರಿ. ವಾರದ ಮಧ್ಯ ಭಾಗದಲ್ಲಿ ನಿಮ್ಮ ಕರ್ತವ್ಯವನ್ನು ಪೂರ್ಣಗೊಳಿಸುವ ಕಡೆಗೆ ಹೆಚ್ಚಿನ ಗಮನ ವಹಿಸಲಿದ್ದೀರಿ. ಶುಭದಿನ: 12. ವಿಷ್ಣು ಸಹಸ್ರನಾಮ ಪಠಿಸಿರಿ.





ಆದಾಯ ಮೂಲದಿಂದ ಹಣಕಾಸಿನ ಹರಿವು ಹೆಚ್ಚಾಗಲಿದೆ. ಸಾಮಾಜಿಕವಾಗಿ ಸ್ಥಾನಮಾನ ಕೂಡ ಹೆಚ್ಚಲಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ಉತ್ತಮವಾದ ಏಳ್ಗೆ ಇದೆ. ತಾಂತ್ರಿಕ ಕೌಶಲ, ಜ್ಞಾನ ಹೆಚ್ಚಿಸಿಕೊಳ್ಳುವುದಕ್ಕೆ ಅವಕಾಶ ದೊರೆಯಲಿದೆ. ಮಗಳ ಪ್ರಗತಿಯಿಂದ ಹೆಮ್ಮೆ, ಸಂತೋಷ ಮೂಡುತ್ತದೆ. ವೈವಾಹಿಕ ಜೀವನದಲ್ಲಿ ಸಂತೋಷ ಇರುತ್ತದೆ. ಶುಭದಿನ: 16. ಶ್ರೀಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.





ನಿಮ್ಮ ಪಾಲಿನ ಕೆಲಸಗಳನ್ನು ವೇಗವಾಗಿ ಪೂರ್ಣಗೊಳಿಸುವಿರಿ. ಸಾಮಾಜಿಕ ಜೀವನದಲ್ಲಿ ವರ್ಚಸ್ಸು ವೃದ್ಧಿಯಾಗಲಿದೆ. ಸಂಗಾತಿಗೆ ಉಡುಗೊರೆ ನೀಡುವ ಬಗ್ಗೆ ಆಲೋಚನೆ ಮಾಡುತ್ತೀರಿ. ಸಂಬಂಧದಲ್ಲಿ ಸುಧಾರಣೆ ಕಾಣಿಸಲಿದೆ. ವಾರದ ದ್ವಿತೀಯಾರ್ಧದಲ್ಲಿ ಹಲವು ವಿಧದಲ್ಲಿ ಉತ್ತಮ ಫಲಿತಾಂಶವನ್ನು ಪಡೆಯಲಿದ್ದೀರಿ. ಕೌಟುಂಬಿಕ ಜೀವನದಲ್ಲಿ ಅತ್ಯುತ್ತಮ ಪ್ರಗತಿ ಇದೆ. ಶುಭದಿನ: 14. ಹನುಮಾನ್ ಚಾಲಿಸ್ ಪಠಿಸಿರಿ.





ಸೇವಾ ವಲಯದಲ್ಲಿ ಇರುವವರಿಗೆ ನಿರಂತರವಾದ ಪ್ರಗತಿ ಇದೆ. ಪ್ರತಿಷ್ಠೆಯನ್ನು ಹೆಚ್ಚು ಮಾಡಿಕೊಳ್ಳುವ ಕಡೆಗೆ ಪ್ರಯತ್ನಿಸಿ. ಆರೋಗ್ಯ ಉತ್ತಮವಾಗಿರುತ್ತದೆ. ಆ ಕಾರಣಕ್ಕೆ ನಿಮ್ಮ ಕೆಲಸವನ್ನು ಪರಿಣಾಮಕಾರಿಯಾಗಿ ಪೂರ್ಣಗೊಳಿಸಲು ಯಶಸ್ವಿಯಾಗುತ್ತೀರಿ. ದಾನ ಧರ್ಮಗಳಲ್ಲಿ ನಾನಾ ಬಗೆಯಲ್ಲಿ ಅಡೆತಡೆ ಉಂಟಾಗುತ್ತದೆ. ನಿಗದಿಯಾದ ಪ್ರವಾಸ ರದ್ದಾಗಬಹುದು. ಶುಭದಿನ: 14. ಆದಿತ್ಯ ಹೃದಯ ಪಠಿಸಿರಿ.




ಹಿಂದೆಂದಿಗಿಂತ ಹೆಚ್ಚು ಸ್ಪರ್ಧಾತ್ಮಕವಾಗಿ ಇರುತ್ತೀರಿ. ಬಹಳ ಶ್ರಮಪಟ್ಟು, ಯಶಸ್ಸು ಪಡೆಯಬೇಕಾಗುತ್ತದೆ. ಸಂವಹನದ ಕೊರತೆ ಎದ್ದು ಕಾಣಲಿದೆ. ಉದ್ಯಮಿಗಳಿಗೆ ಹಲವು ಬಗೆಯಲ್ಲಿ ಸವಾಲುಗಳು ಎದುರಾಗಲಿವೆ. ವೈಯಕ್ತಿಕ ಸಂಬಂಧದಲ್ಲಿ ಭಿನ್ನಾಭಿಪ್ರಾಯ ಕಾಣಿಸಿಕೊಳ್ಳಲಿದೆ. ವ್ಯವಹಾರದಲ್ಲಿ ಹೊಸ ಅವಕಾಶವೊಂದು ತೆರೆದುಕೊಳ್ಳುತ್ತದೆ. ಶುಭದಿನ: 13. ಕಾಲಭೈರವನ ಆರಾಧನೆ ಮಾಡಿರಿ.




ವಾರದ ಆರಂಭದಲ್ಲಿ ನಿಮ್ಮ ಜವಾಬ್ದಾರಿಯನ್ನು ಪೂರೈಸುವುದಕ್ಕಾಗಿಯೇ ಹೆಚ್ಚು ಸಮಯವನ್ನು ಮೀಸಲಿಡಿ. ನಿಮ್ಮ ನಡವಳಿಕೆಯಿಂದ ಸಹೋದ್ಯೋಗಿಗಳು ಬಹಳ ಹೆಮ್ಮೆ ಪಡುತ್ತಾರೆ. ನಿಮ್ಮ ಸಾಮಾಜಿಕ ಸ್ಥಾನಮಾನದಲ್ಲಿ ಹೆಚ್ಚಳ. ಆದಾಯ ಮೂಲಗಳಿಂದ ಹೆಚ್ಚು ಅನುಕೂಲ ಇದೆ. ನಿಮ್ಮ ಶ್ರಮಕ್ಕೆ ತಕ್ಕ ಫಲಿತ ದೊರೆಯಲಿದೆ. ದೈಹಿಕ ಆಯಾಸ ಕಾಣಿಸಿಕೊಳ್ಳುತ್ತದೆ. ಶುಭದಿನ: 14. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಭವಿಷ್ಯದ ಬಗ್ಗೆ ನಿರ್ಧಾರ ಮಾಡುವ ಸಲುವಾಗಿ ವಾರದ ಶುರುವಿನಲ್ಲಿ ಹೆಚ್ಚಿನ ಸಮಯ ನೀಡುತ್ತೀರಿ. ದೂರ ಪ್ರದೇಶಗಳಿಗೆ ಪ್ರಯಾಣ ಮಾಡಬೇಕಾಗುತ್ತದೆ. ನಿಮ್ಮ ಪ್ರಯತ್ನಗಳನ್ನು ಹೆಚ್ಚು ಪರಿಣಾಮಕಾರಿಯಾಗಿ ಮಾಡಲು ಗಮನ ನೀಡುತ್ತೀರಿ. ಕಡ್ಡಾಯವಾಗಿ ವೈದ್ಯರನ್ನು ಭೇಟಿ ಮಾಡಿ, ಸಲಹೆ ಪಡೆದುಕೊಳ್ಳಿ. ಹಣ ಹೂಡಿಕೆಯಲ್ಲಿ ಲಾಭವಾಗುವ ಸಾಧ್ಯತೆ ಇದೆ. ಶುಭದಿನ: 15. ದತ್ತಗುರು ಚರಿತ್ರೆ ಪಠಿಸಿರಿ.